ನಂದೀಶ್ವರ ಗ್ರಾಮದ ಹತ್ತಿರ ಮಲಪ್ರಭಾ ನದಿಗೆ ಬ್ಯಾರೇಜು ನಿರ್ಮಾಣ

2112: ಶ್ರೀ ಎಂ.ಕೆ. ಪಟ್ಟಣಶೆಟ್ಟಿ (ಬಾದಾಮಿ):– ಮಾನ್ಯ ಭಾರಿ ನೀರಾವರಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ನಂದೀಶ್ವರ ಗ್ರಾಮದ ಹತ್ತಿರ ಮಲಪ್ರಭಾ ನದಿಗೆ ಬ್ಯಾರೇಜು ನಿರ್ಮಾಣದ ಯೋಜನೆಯು ಮಂಜೂರಾಗಿದೆಯೇ;

ಆ) ಆಗಿದ್ದರೆ, ಯಾವ ಯೋಜನೆಯ ಅಡಿಯಲ್ಲಿ ಮಂಜೂರಾಗಿದೆ;

ಇ) ಕೆಲಸದ ಪ್ರಗತಿಯ ವಿವರ ಒದಗಿಸುವುದು ?

ಶ್ರೀ ಓಂ ಪ್ರಕಾಶ್ ಕಣಗಲಿ (ಭಾರಿ ನೀರಾವರಿ ರಾಜ್ಯ ಮಂತ್ರಿಗಳು):–

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ.

ಬಂಟ್ವಾಳ ತಾಲ್ಲೂಕಿನ ಏತ ನೀರಾವರಿ ಯೋಜನೆ ಕಾಮಗಾರಿ ಕೆಲಸ

2126: ಶ್ರೀ ಎ. ರುಕ್ಮಯ್ಯ ಪೂಜಾರಿ, (ವಿಟ್ಲ):– ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಂಟ್ವಾಳ ತಾಲ್ಲೂಕಿನ ಏತ ನೀರಾವರಿ ಯೋಜನೆಯ ಕಾಮಗಾರಿ ಕೆಲಸಗಳು ನಿಧಾನಗತಿಯಿಂದ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನಿಧಾನ ಗತಿಯಿಂದ ಸಾಗಲು ಕಾರಣಗಳೇನು ಇದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ;

ಇ) ಹಾಗಿದ್ದಲ್ಲಿ ಸದರಿ ಯೋಜನೆಯ ಕೆಲಸಗಳು ಬೇಗನೆ ಪೂರ್ತಿ ಆಗಲು ಸರ್ಕಾರವು ತೆಗೆದುಕೊಳ್ಳುವ ಕ್ರಮವೇನು ?

ಡಾ. ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯ ಸಚಿವರು):–

ಅ) ಬಂದಿದೆ.

ಆ) ಯೋಜನೆಗೆ ನಬಾರ್ಡ್‌ನಿಂದ ಸಾಲ ಸೌಲಭ್ಯ ಇನ್ನೂ ದೊರಕದೆ ಇರುವುದರಿಂದ ಕೆಲಸಗಳು ನಿಧಾನಗತಿಯಲ್ಲಿ ನಡೆದಿದೆ.

ಇ) ನಬಾರ್ಡ್‌ನಿಂದ ಆರ್ಥಿಕ ನೆರವು ದೊರೆತ ನಂತರ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು.